ಇ) ಹಾಗಿದ್ದಲ್ಲಿ ಅಧಿಕಾರಿಗಳು ಅರ್ಹರಿಲ್ಲದಿದ್ದಾಗ್ಯೂ ವಾಹನ ಬಳಕೆ ಮಾಡುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ? ಆ ಅಧಿಕಾರಿಗಳ ಹೆಸರು ನೀಡುವುದು;

ಈ) ಈ ರೀತಿ ವಾಹನ ಬಳಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟವಾಗುತ್ತಿದೆ, ಮತ್ತು ಇದರ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವಿವರ ನೀಡುವುದು ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)–

ಅ) ಸರ್ಕಾರದ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳು ಮಾತ್ರ ವಾಹನ ಚಾಲಕರ ಸಹಿತ ನಾಮ ನಿರ್ದಿಷ್ಟ ಸಾಮೂಹಿಕ ವಾಹನಗಳನ್ನು ಹೊಂದಲು ಅರ್ಹರಿರುವರು, ಇತರೆ ಅಧಿಕಾರಿಗಳು ಅಧಿಕೃತ ಕೆಲಸ ಕಾರ್ಯಗಳಿಗೆ ಅವಕಾಶವಿದೆ.

ಆ) ಅಧಿಕೃತವಲ್ಲದ ಕೆಲಸ ಕಾರ್ಯಗಳಿಗೆ ವಾಹನ ಬಳಕೆ ಮಾಡುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

3538 (4305) : ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ) – ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗಲಕೋಟೆ ಕ್ಷೇತ್ರ ವ್ಯಾಪ್ತಿಯ ಕಲಾದಗಿ ಎಂಬಲ್ಲಿ ಕಳೆದ 11 ವರ್ಷಗಳ ಹಿಂದೆ ಪ್ರಾರಂಭಗೊಂಡ ಲಿಫ್ಟ್ ಇರಿಗೇಷನ್ ಕಾಮಗಾರಿಯು ದೀರ್ಘಕಾಲದ ವಿಳಂಬಕ್ಕೆ ಒಳಗಾಗಲು ಇರುವ ಕಾರಣಗಳೇನು; ಹಾಗಿದ್ದಲ್ಲಿ, ಅದನ್ನು ಪೂರ್ಣಗೊಳಿಸಿ ರೈತರಿಗೆ ಅನುಕೂಲ ಮಾಡಿಕೊಡಲು ಸರಕಾರ ಉದ್ದೇಶಿಸಿದೆಯೆ;

ಆ) ಅಪ್ಪರ್ ಕೃಷ್ಣಾ ಪ್ರಾಜೆಕ್ಟ್‌ನಲ್ಲಿ ಮುಳುಗಡೆಯಾದಂತಹ ಮುರನಾಳ, ಅನದಿನ್ನಿ, ಬೆಣ್ಣೂರು, ಕಲಾದಗಿ ಊರುಗಳಲ್ಲಿನ ಲಿಫ್ಟ್ ಇರಿಗೇಶನ್ ಯೋಜನೆಗಳನ್ನು ಸೂಕ್ತ ಹಾಗೂ ಉಪಯುಕ್ತವಾದ ಇತರ ಊರುಗಳಲ್ಲಿ ನಿರ್ಮಾಣ ಮಾಡಬೇಕೆಂಬ ಕುರಿತು ಸರಕಾರ ಆಜ್ಞೆ ಮಾಡಿದ್ದರೂ ಯೋಜನೆಯ ಕೆಲಸವನ್ನು ಇನ್ನೂ ಪ್ರಾರಂಭ ಮಾಡದಿರಲು ಕಾರಣಗಳೇನು;

ಇ) ಬಾಗಲಕೋಟೆ ಕ್ಷೇತ್ರದ ಜನರಿಗೆ ಅತ್ಯಂತ ಉಪಯುಕ್ತವಾದ ಈ ಲಿಫ್ಟ್ ಇರಿಗೇಶನ್ ಯೋಜನೆಗಳನ್ನು ಶೀಘ್ರದಲ್ಲಿಯೇ ಪ್ರಾರಂಭಿಸಿ, ಪೂರ್ಣಗೊಳಿಸಿ, ರೈತರಿಗೆ ಅನುಕೂಲ ಮಾಡಿಕೊಡುವ ಸರ್ಕಾರದ ಕ್ರಿಯಾ ಯೋಜನೆಗಳೇನು ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)–

ಕಲಾದಗಿ ಏತ ನೀರಾವರಿ ಯೋಜನೆಯು ಅಲಮಟ್ಟಿ ಅಣೆಕಟ್ಟಿನ ಹಿನ್ನೀರಿನಿಂದ ಮುಳುಗಡೆಯಾಗಿ ಸ್ಥಗಿತಗೊಂಡಿದೆ. ಅನುದಾನದ ಕೊರತೆಯಿಂದಾಗಿ ಈ ಯೋಜನೆಯನ್ನು ಸ್ಥಳಾಂತರಿಸಿ ಪುನರ್ ನಿರ್ಮಾಣ ಮಾಡಲು ಸಾಧ್ಯವಾಗಿಲ್ಲ.

ಆ) ಮುರನಾಳ, ಅನದಿನ್ನಿ, ಮತ್ತುಕಲಾದಗಿ ಈ ಮೂರು ಏತನೀರಾವರಿ ಯೋಜನೆಗಳನ್ನು ಸಣ್ಣ ನೀರಾವರಿ ಇಲಾಖೆ ಯಿಂದ ಪುನರ್ ನಿರ್ಮಾಣಮಾಡಲು ಜಲ ಸಂಪನ್ಮೂಲ ಇಲಾಖೆಯಿಂದ ಆದೇಶವಾಗಿದ್ದು ಅನುದಾನದ ಕೊರತೆಯಿಂದ ಕಾಮಗಾರಿಗಳನ್ನು ಪ್ರಾರಂಭಿಸಲು ಸಾಧ್ಯವಾಗಿಲ್ಲ.

ಇ) ಅನುದಾನದ ಕೊರತೆಯಿಂದ ಯಾವುದೇ ಹೊಸ ಕಾಮಗಾರಿಗಳನ್ನು ಪ್ರಾರಂಭಿಸಲು ಸಾಧ್ಯವಾಗುತ್ತಿಲ್ಲ.

3539 (4535) ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ) – ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯಮಾಡಿ ಉತ್ತರಿಸುವರೆ?

ಅ) ರಾಜ್ಯದಲ್ಲಿ ರಾಜಕೀಯ ವಿಶ್ರಾಂತಿ ವೇತನವನ್ನು ಪಡೆಯುತ್ತಿರುವ ಸ್ವಾತಂತ್ರ್ಯ ಹೋರಾಟಗಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು);

ಆ) ಕಳೆದ ಮೂರು ವರ್ಷಗಳಲ್ಲಿ ರಾಜಕೀಯ ವಿಶ್ರಾಂತಿ ವೇತನಕ್ಕಾಗಿ ಅರ್ಜಿ ಸಲ್ಲಿಸಿರುವ ಸ್ವಾತಂತ್ರ್ಯ ಹೋರಾಟಗಾರರ ಸಂಖ್ಯೆ ಎಷ್ಟು ;

ಇ) ಅವರಲ್ಲಿ ಎಷ್ಟು ಜನರಿಗೆ ರಾಜಕೀಯ ವಿಶ್ರಾಂತಿ ವೇತನವನ್ನು ಮಂಜೂರು ಮಾಡಲಾಗಿದೆ ?

**ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)**–

ಅ) 12964 ಜಿಲ್ಲಾವಾರು ಮಾಹಿತಿಯನ್ನು ಅನುಬಂಧಿಸಲಾಗಿದೆ.